# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1083

ಸದಸ್ಯರ ಹೆಸರು : ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ)

ಉತ್ತರಿಸಬೇಕಾದ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು

ಉತ್ತರಿಸಬೇಕಾದ ದಿನಾಂಕ : 20-08-2025

| | ಪ್ರಶ್ನೆ | ಉತ್ತರ |
|---|---|---|
| ಅ. | ಬೆಂಗಳೂರಿನ ನಗರದಾದ್ಯಂತ ಇರುವ ಸಾರ್ವಜನಿಕ ಆಟೋ ಸೇವೆಯಲ್ಲಿ ಜಿಲ್ಲಾಧಿಕಾರಿಗಳು ದರ ಏರಿಕೆ ಮಾಡಲು ಕಾರಣವೇನು; | ಆಟೋರಿಕ್ಷಾ ದರಗಳನ್ನು ಸಂಬಂಧಪಟ್ಟ ಪ್ರಾದೇಶಿಕ ಸಾರಿಗೆ ಪ್ರಾಧಿಕಾರಗಳು ನಿಗದಿಪಡಿಸುವ ಅಧಿಕಾರವನ್ನು ಹೊಂದಿರುತ್ತವೆ. ಪ್ರಾದೇಶಿಕ ಸಾರಿಗೆ ಪ್ರಾಧಿಕಾರದ ಅಧ್ಯಕ್ಷರು ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳಾಗಿದ್ದು, ಪೊಲೀಸ್ ವರಿಷ್ಠಾಧಿಕಾರಿಗಳು ಸದಸ್ಯರಾಗಿರುತ್ತಾರೆ ಹಾಗೂ ಆಯಾ ಜಿಲ್ಲೆಯ ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ಕಾರ್ಯದರ್ಶಿಗಳಾಗಿರುತ್ತಾರೆ. ಸದರಿ ಪ್ರಾಧಿಕಾರವು ಆಯಾ ಜಿಲ್ಲೆಯ ಸ್ಥಿತಿಗತಿಗಳನ್ನು ಪರಿಶೀಲಿಸಿ ಸೂಕ್ತ ದರ ನಿಗದಿಪಡಿಸುತ್ತವೆ.<br><br>ಬೆಂಗಳೂರು ನಗರಕ್ಕೆ ಸಂಬಂಧಿಸಿದಂತೆ ವಿವಿಧ ಆಟೋರಿಕ್ಷಾ ಸಂಘ ಸಂಸ್ಥೆಗಳು ಆಟೋರಿಕ್ಷಾ ದರ ಪರಿಷ್ಕರಣೆ ಕೋರಿ ಸಲ್ಲಿಸಲಾಗಿರುವ ಮನವಿಗಳ ಅನ್ವಯ ಪ್ರಸ್ತುತ ಆಟೋರಿಕ್ಷಾ ವಾಹನದ ಮುಖಬೆಲೆ ಹಾಗೂ ಇಂಧನದ ಬೆಲೆ ಏರಿಕೆಯ ಆಧಾರದ ಮೇಲೆ ಆಟೋರಿಕ್ಷಾ ದರ ಪರಿಷ್ಕರಣೆ ಮಾಡಲಾಗಿರುತ್ತದೆ.<br><br>ದರ ಏರಿಕೆಯಿಂದ ಸಮಸ್ಯೆ ಉಂಟಾದ ಕುರಿತು ಈವರೆಗೆ ಯಾವುದೇ ದೂರುಗಳು ಸರ್ಕಾರಕ್ಕೆ ಬಂದಿರುವುದಿಲ್ಲ. |
| ಆ. | ದರ ಏರಿಕೆಯಿಂದಾಗಿ ಸಾರ್ವಜನಿಕರು ಹಾಗೂ ಮೊದಲೇ ಉಚಿತ ಬಸ್ ಸೇವೆಯಿಂದ ಆರ್ಥಿಕ ನಷ್ಟ ಅನುಭವಿಸುತ್ತಿರುವ ಆಟೋ ಚಾಲಕರು ಇಬ್ಬರಿಂದಲೂ ವಿರೋಧ ವ್ಯಕ್ತವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಕೈಗೊಳ್ಳಬಹುದಾದ ಕ್ರಮಗಳೇನು; | |
| ಇ. | ಈ ಮೊದಲೇ ಸುರಕ್ಷತೆ ಮತ್ತು ಭದ್ರತೆಯ ಹಿತದೃಷ್ಟಿಯಿಂದಾಗಿ ಕ್ಯಾಬ್‌ಗಳ ಮೊರೆ ಹೋಗಿರುವ ಸಾರ್ವಜನಿಕರಿಂದಾಗಿ ಆಟೋ ಚಾಲಕರಿಗೆ ಆರ್ಥಿಕ ನಷ್ಟ ಉಂಟಾಗುತ್ತಿರುವುದರಿಂದ ಈಗ ದರ ಏರಿಕೆ ಮಾಡಿರುವುದು ಸರಿಯೇ? (ವಿವರಣೆ ನೀಡುವುದು) | ಬೆಂಗಳೂರು ನಗರಕ್ಕೆ ಸಂಬಂಧಿಸಿದಂತೆ ವಿವಿಧ ಆಟೋರಿಕ್ಷಾ ಸಂಘ ಸಂಸ್ಥೆಗಳು ಆಟೋರಿಕ್ಷಾ ದರ ಪರಿಷ್ಕರಣೆ ಕೋರಿ ಸಲ್ಲಿಸಲಾಗಿರುವ ಮನವಿಗಳ ಅನ್ವಯ ಪ್ರಸ್ತುತ ಆಟೋರಿಕ್ಷಾ ವಾಹನದ ಮುಖಬೆಲೆ ಹಾಗೂ ಇಂಧನದ ಬೆಲೆ ಏರಿಕೆಯ ಆಧಾರದ ಮೇಲೆ ಆಟೋರಿಕ್ಷಾ ದರ ಪರಿಷ್ಕರಣೆ ಮಾಡಲಾಗಿರುತ್ತದೆ.<br><br>ಈ ಹಿಂದೆ ದಿನಾಂಕ:06.11.2021 ರಲ್ಲಿ ದರ ಪರಿಷ್ಕರಣೆ ಮಾಡಲಾಗಿದ್ದು, ಪ್ರಸ್ತುತ ನಾಲ್ಕು ವರ್ಷಗಳ ನಂತರ ದರ ಪರಿಷ್ಕರಣೆ ಮಾಡಿರುವುದು ಸೂಕ್ತವಾಗಿರುತ್ತದೆ. |

**ಟಿಡಿ 64 ಟಿಡಿಕ್ಯೂ 2025**

(ರಾಮಲಿಂಗಾರೆಡ್ಡಿ)
ಸಾರಿಗೆ ಮತ್ತು ಮುಜರಾಯಿ ಸಚಿವರು